# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1715 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 23.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಿಂಧನೂರು ನಗರದ ಹೃದಯ ಭಾಗದಲ್ಲಿ ಆಹಾರ ಪದಾರ್ಥಗಳನ್ನು ಸಂರಕ್ಷಿಸಿಡುವ ಉದ್ದೇಶದಿಂದ ನಿರ್ಮಾಣಗೊಂಡಿರುವ ಗೋದಾಮು ಶಿಥಿಲಾವಸ್ಥೆಯಲ್ಲಿದ್ದು, ಪ್ರಸ್ತುತ ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಿಂಧನೂರು ನಗರದ ಹೃದಯ ಭಾಗದಲ್ಲಿರುವ ಗೋದಾಮು ಶಿಥಿಲಾವಸ್ಥೆಯಲ್ಲಿರುವುದು ಮತ್ತು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ | ಸದರಿ ಜಾಗವು ಸ್ವಚ್ಛತೆಯಿಂದ ಕೂಡಿಲ್ಲದಿರುವುದು ಹಾಗೂ ಖಾಸಗಿ ವ್ಯಕ್ತಿಗಳು ಅದನ್ನು ಅತಿಕ್ರಮಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಿಂಧನೂರಿನ ಹೃದಯ ಭಾಗದಲ್ಲಿರುವ ನಿಗಮದ ಸ್ವತ್ತನ್ನು ಮೂರು ದಿಕ್ಕಿನಲ್ಲಿಯೂ ಕೆಲವು ಭಾಗದಲ್ಲಿ ಖಾಸಗಿ ವ್ಯಕ್ತಿಗಳು ಅತಿಕ್ರಮಣ ಮಾಡಿರುತ್ತಾರೆ. ಒತ್ತುವರಿ ತೆರವುಗೊಳಿಸುವ ಸಂಬಂಧ ನ್ಯಾಯಾಲಯದಲ್ಲಿ ಸಿಂಧನೂರಿನ ಸಕ್ಷಮ ಪ್ರಕರಣವು ವಿಚಾರಣೆಯಲ್ಲಿರುತ್ತದೆ. |
| ಇ | ಇದ್ದಲ್ಲಿ ಈ ಸಂಬಂಧ ಸರ್ಕಾರ ಸದರಿ ಗೋದಾಮಿನ ಜಾಗವನ್ನು ಸ್ವಚ್ಛಗೊಳಿಸಿ ಇಲಾಖೆಯ ವತಿಯಿಂದ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಯಾವ ಕ್ರಮವಹಿಸಿದೆ. | ಸಿಂಧನೂರಿನ ಗೋದಾಮಿನಲ್ಲಿ ಆಹಾರ ಧಾನ್ಯಗಳನ್ನು ಶೇಖರಿಸಲು ಸೂಕ್ತವಾಗಿರದ ಕಾರಣ ಸದರಿ ಗೋದಾಮುಗಳನ್ನು ದುರಸ್ಥಿ ಮಾಡಿಸಲು ಸಹ ಸೂಕ್ತವಾಗಿರದ ಕಾರಣ ಸದರಿ ಗೋದಾಮುಗಳನ್ನು ತೆರವುಗೊಳಿಸಿ ವೈಜ್ಞಾನಿಕವಾಗಿ ಗೋದಾಮುಗಳನ್ನು ನಿರ್ಮಾಣ ಮಾಡಲು ಪೂರ್ವ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ. ಈಗಾಗಲೇ ತಂತಿಬೇಲಿಯನ್ನು ಅಳವಡಿಸಿ ಅನಧಿಕೃತ ವ್ಯಕ್ತಿಗಳು ಪ್ರವೇಶಿಸುವುದನ್ನು ನಿರ್ಭಂಧಿಸಲಾಗಿದೆ. |
| ಈ | ಯಾವ ಕಾಲಮಿತಿಯೊಳಗೆ ಸದರಿ ಗೋದಾಮಿನ ಜಾಗವನ್ನು ಸ್ವಚ್ಛಗೊಳಿಸಿ, ಖಾಸಗಿ ಅತಿಕ್ರಮಣವನ್ನು ತೆರವುಗೊಳಿಸಿ ಇಲಾಖೆಯಿಂದ ಸದ್ಬಳಕೆ ಮಾಡಿಕೊಳ್ಳಲಾಗುವುದು? | ಸಿಂಧನೂರು ಪಟ್ಟಣದ ಹೃದಯ ಭಾಗದಲ್ಲಿರುವ ಸ್ವತ್ತನ್ನು ನಿಗಮವನ್ನು ಹೊರತುಪಡಿಸಿ, ಬೇರ ಉದ್ದೇಶದ ಕಟ್ಟಡಗಳಿಗೆ ಅವಕಾಶ ಮಾಡಿಕೊಟ್ಟಲ್ಲಿ ನಿಗಮವು ತೀವ್ರ ನಷ್ಟಕ್ಕೆ ಒಳಗಾಗುವುದಲ್ಲದೇ ನಿಗಮಕ್ಕೆ ಮತ್ತೆ ಅಂತಹ ಆಯಕಟ್ಟಿನ ಆಸ್ತಿಯು ಗೋದಾಮು ನಿರ್ಮಿಸಲು ದೊರೆಯುವುದಿಲ್ಲ. |

| | | |
|---|---|---|
| | | ಸದರಿ ಸ್ವತ್ತಿನಲ್ಲಿ ವೈಜ್ಞಾನಿಕ ಗೋದಾಮು ನಿರ್ಮಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಒತ್ತುವರಿ ತೆರವುಗೊಳಿಸುವ ಸಂಬಂಧ ಒತ್ತುವರಿದಾರರು ಸಕ್ಷಮ ನ್ಯಾಯಾಲಯದಲ್ಲಿ ದಾಖಲಿಸಿರುವ ಪ್ರಕರಣಗಳು ಇತ್ಯರ್ಥವಾದ ಕೂಡಲೇ ಒತ್ತುವರಿಯನ್ನು ತೆರವುಗೊಳಿಸಿ, ಸಂಪೂರ್ಣವಾಗಿ ನಿಗಮವು ಸ್ವತ್ತನ್ನು ಸದ್ಬಳಕೆ ಮಾಡಿಕೊಳ್ಳಲಾಗುತ್ತದೆ. |

ಇ-ಆನಾಸ 37 ಆರ್‌ಪಿಆರ್ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು